ಕರ್ನಾಟಕ ಸರ್ಕಾರ
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21** **ದಿನಾಂಕ : 01–12–2020**

# ಮಾಧ್ಯಮ ಆಮಂತ್ರಣ

1. ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ (ನಿ.) ನೂತನವಾಗಿ ನೇಮಕವಾಗಿರುವ ಅಧ್ಯಕ್ಷರ ಪದಗ್ರಹಣ ಮತ್ತು ಮಾವು ಬೆಳೆಗಾರರೊಂದಿಗೆ ಸಂವಾದ ಕಾರ್ಯಕ್ರಮ.

ದಿನಾಂಕ: 02–12–2020, ಬುಧವಾರ, ಸಮಯ: ಬೆಳಿಗ್ಗೆ 11:30 ಗಂಟೆಗೆ

ಸ್ಥಳ: ಡಾ.ಎಂ.ಹೆಚ್. ಮರಿಗೌಡ ಸಭಾಂಗಣ, ಮೈಸೂರು ಉದ್ಯಾನ ಕಲಾಸಂಘ, ಲಾಲ್‌ಬಾಗ್, ಡಬಲ್ ರೋಡ್ ಗೇಟ್, ಬೆಂಗಳೂರು.

2. ಪತ್ರಿಕಾಗೋಷ್ಠಿ

ಪ್ರೋ. ಎನ್. ಲಿಂಗಣ್ಣ, ಅಧ್ಯಕ್ಷರು, ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ

ದಿನಾಂಕ: 02–12–2020, ಬುಧವಾರ, ಸಮಯ: ಅಪರಾಹ್ನ 12:30 ಗಂಟೆಗೆ

ಸ್ಥಳ: ಡಾ. ಬಾಬು ಜಗಜೀವನ ರಾಂ ಲಿಡ್‌ಕರ್ ಭವನ, ಮಿಲ್ಲರ್ ಟ್ಯಾಂಕ್ ಬಂಡ್ ಏರಿಯಾ, ವಸಂತ ನಗರ, ಬೆಂಗಳೂರು–560 052.

3. ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆವತಿಯಿಂದ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ

ಮುಖ್ಯ ಅತಿಥಿಗಳು:

ವಜುಭಾಯಿ ವಾಲಾ, ರಾಜ್ಯಪಾಲರು

ಅಧ್ಯಕ್ಷತೆ:

ಬಸವರಾಜ ಬೊಮ್ಮಾಯಿ, ಗೃಹ ಸಚಿವರು.

ವಿಶೇಷ ಅತಿಥಿ:

ಲೆಫ್ಟಿನೆಂಟ್ ಜನರಲ್ ವಿ.ಜೆ.ಸುಂದರಂ, ಪಿವಿಎಸ್‌ಎಮ್, ಎವಿಎಸ್‌ಎಮ್, ವಿಎಸ್‌ಎಮ್ (ನಿವೃತ್ತ)

ದಿನಾಂಕ: 02-12-2020, ಬುಧವಾರ, ಸಮಯ: ಸಂಜೆ 4:30 ಗಂಟೆಗೆ

ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

## ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ

**ಬೆಂಗಳೂರು, ಡಿಸೆಂಬರ್ 01 (ಕರ್ನಾಟಕ ವಾರ್ತೆ):**
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು 2020-21 ನೇ ಸಾಲಿನಲ್ಲಿ NTS & NMMS ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸಿದೆ.

2020-21ನೇ ಸಾಲಿನ NTS-NMMS ಪರೀಕ್ಷೆಗಳನ್ನು ದಿನಾಂಕ: 24.01.2021 ರಂದು ನಡೆಸಲಾಗತ್ತಿದ್ದು, ಸದರಿ ಪರೀಕ್ಷೆಗಳಿಗೆ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ www.kseeb.kar.nic.in ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ದಿನಾಂಕ:09.11.2020 ರಿಂದ ದಿನಾಂಕ: 30.11.2020 ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

ಇಲಾಖಾ ಆಧಿಕಾರಿಗಳು ಹಾಗೂ ಶಾಲಾ ಮುಖ್ಯ ಶಿಕ್ಷಕರ ಕೋರಿಕೆಯ ಮೇರೆಗೆ ಅರ್ಜಿ ಸಲ್ಲಿಸುವ **ದಿನಾಂಕವನ್ನು 10.12.2020** ರವರೆಗೆ ವಿಸ್ತರಿಸಲಾಗಿದೆ. ಇದರ ಸದುಪಯೋಗವನ್ನು ಪಡೆದು

ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳ ಅರ್ಜಿ ಸಲ್ಲಿಸಲು ಇಲಾಖಾ ಅಧಿಕಾರಿಗಳು ಮತ್ತು ಶಾಲಾ ಮುಖ್ಯ ಶಿಕ್ಷಕರು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ಸಹಾಯವಾಣಿ ಸಂಖ್ಯೆ:080–**23341615** ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಪ್ರೇಕ್ಷಕರನ್ನು ಮತ್ತೆ ಚಿತ್ರಮಂದಿರದತ್ತ ಸೆಳೆಯಲು 13ನೇ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವಕ್ಕೆ ಚಾಲನೆಗೆ ಮುಖ್ಯಮಂತ್ರಿ ಸಮ್ಮತಿ

**ಬೆಂಗಳೂರು, ಡಿಸೆಂಬರ್ 01 (ಕರ್ನಾಟಕ ವಾರ್ತೆ):**

ಪ್ರೇಕ್ಷಕರನ್ನು ಮತ್ತೆ ಚಿತ್ರಮಂದಿರಗಳತ್ತ ಸೆಳೆಯಲು 13ನೇ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವ ಪೂರಕ ವಾತಾವರಣವನ್ನು ನಿರ್ಮಿಸಲಿದೆ. ಆದಕಾರಣ, 2021ರ ಫೆಬ್ರವರಿ ಮೂರು ಅಥವಾ ನಾಲ್ಕನೇ ವಾರದಲ್ಲಿ ಸಿನಿಮೋತ್ಸವವನ್ನು ಆಯೋಜಿಸಲು ಅನುಮತಿ ನೀಡುವಂತೆ ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಸುನಿಲ್ ಪುರಾಣಿಕ್ ಅವರ ನೇತೃತ್ವದ ನಿಯೋಗವು ಮಾಡಿದ ಮನವಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸ್ಪಂದಿಸಿದ್ದಾರೆ.

ತಮ್ಮನ್ನು ಭೇಟಿ ಮಾಡಿದ ನಿಯೋಗವು ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವ ಸತತ ಕಳೆದ 12 ವರ್ಷಗಳ ಕಾಲ ಯಶಸ್ಸನ್ನು ಕಂಡಿದೆ. ವಿಶ್ವದಲ್ಲಿ 5000 ಸ್ಥಳಗಳಲ್ಲಿ ಚಲನಚಿತ್ರೋತ್ಸವಗಳು ನಡೆಯುತ್ತವೆ. ಆದರೆ, ಅವುಗಳಲ್ಲಿ ಕೇವಲ 45 ಚಲನಚಿತ್ರೋತ್ಸವಗಳಿಗೆ ಅಂತರರಾಷ್ಟ್ರೀಯ ಮಾನ್ಯತೆ ದೊರೆತಿದೆ. ಇದೀಗ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವಕ್ಕೆ ಅಂತರರಾಷ್ಟ್ರೀಯ ಮಾನ್ಯತೆ ದೊರೆಯುವ ಲಕ್ಷಣಗಳು ಗೋಚರಿಸುತ್ತಿವೆ. ಒಂದು ವೇಳೆ ಮಾನ್ಯತೆ ದೊರೆತಲ್ಲಿ ಇದು ವಿಶ್ವದಲ್ಲಿ 46ನೇ ಮಾನ್ಯತೆ ಪಡೆದ ಅಂತರರಾಷ್ಟ್ರೀಯ ಚಲನಚಿತ್ರೋತ್ಸವ ಎಂಬ ಹೆಗ್ಗಳಿಕೆಗೆ ಪಾತ್ರವಾಗುತ್ತದೆ. ಆದ್ದರಿಂದ 13 ನೇ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವವನ್ನು ಆಯೋಜಿಸಲು ಸಮ್ಮತಿ ನೀಡುವಂತೆಯೂ ಹಾಗೂ ಅದಕ್ಕೆ ಅಗತ್ಯ ಅನುದಾನವನ್ನು ದೊರಕಿಸಿಕೊಡುವಂತೆಯೂ ನಿಯೋಗವು ಮುಖ್ಯಮಂತ್ರಿಗೆ ಮನವಿ ಸಲ್ಲಿಸಿತು.

ಭಾರತದಲ್ಲಿ ಕೇವಲ ನಾಲ್ಕು ಸ್ಥಳಗಳಲ್ಲಿ ಚಲನಚಿತ್ರೋತ್ಸವಗಳು ನಡೆಯುತ್ತವೆ. ಗೋವಾದಲ್ಲಿ ಭಾರತ ಸರ್ಕಾರ ಚಲನಚಿತ್ರೋತ್ಸವವನ್ನು ಆಯೋಜಿಸುತ್ತದೆ. ಉಳಿದಂತೆ ಪಶ್ಚಿಮ ಬಂಗಾಳ, ಕರ್ನಾಟಕ ಮತ್ತು ಕೇರಳ ರಾಜ್ಯ ಸರ್ಕಾರಗಳು ಚಲನನಚಿತ್ರೋತ್ಸವಗಳನ್ನು ಆಯೋಜಿಸುತ್ತಿವೆ ಎಂಬ ಅಂಶವನ್ನು ನಿಯೋಗವು ಮುಖ್ಯಮಂತ್ರಿಯವರ ಗಮನಕ್ಕೆ ತಂದಿತು.

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷ ಡಿ.ಆರ್.ಜಯರಾಜ್, ಕಲಾನಿರ್ದೇಶಕ ಎನ್. ವಿದ್ಯಾಶಂಕರ್, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರೂ ಹಾಗೂ ಹೆಸರಾಂತ ಚಿತ್ರನಟಿ ಶ್ರೀಮತಿ ಶೃತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಡಾ.ಪಿ.ಎಸ್.ಹರ್ಷ, ಹಿರಿಯ ಪತ್ರಕರ್ತ ಮತ್ತು ಚಿತ್ರ ವಿಮರ್ಶಕ ಮುರಳೀಧರ್ ಖಜಾನೆ ಹಾಗೂ ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಜಿ.ಹಿಮಂತರಾಜು ಅವರು ಈ ನಿಯೋಗದಲ್ಲಿದ್ದರು.

## ಕರ್ನಾಟಕ ಲಲಿತಕಲಾ ಅಕಾಡೆಮಿ
## 2019-20ನೇ ಸಾಲಿನ ಫೆಲೋಶಿಪ್ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಡಿಸೆಂಬರ್ 01 (ಕರ್ನಾಟಕ ವಾರ್ತೆ):**

ಕರ್ನಾಟಕ ಲಲಿತಕಲಾ ಅಕಾಡೆಮಿಯು 2019-20ನೇ ಸಾಲಿನ ವಿವಿಧ ಫೆಲೋಶಿಪ್‌ಗಳ ಅಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಪ್ರಕಟಿಸಿದೆ.

ಸೀನಿಯರ್ ಫೆಲೋಶಿಪ್ ಯೋಜನೆಯಡಿಯಲ್ಲಿ ಜಮಖಂಡಿಯ ವಿಜಯ ಸಿಂಧೂರ, ಮಂಗಳೂರಿನ ಜಿ.ಕಂದನ್, ಮೈಸೂರಿನ ಗಂಜೀಫಾ ರಘುಪತಿಭಟ್ ಆಯ್ಕೆಯಾಗಿದ್ದಾರೆ.

ಫೆಲೋಶಿಪ್‌ಯಡಿಯಲ್ಲಿ ಬೆಂಗಳೂರಿನ ಡಿಂಪಲ್ ಬಿ. ಷಹಾ, ಮೈಸೂರಿನ ಸುರೇಶ್ ಕೆ, ವಿಜಯಪುರದ ನಿಂಗನಗೌಡ ಸಿ ಪಾಟೀಲ, ಬೆಂಗಳೂರಿನ ಮಂಜುನಾಥ ಕಲ್ಲೆದೇವರು, ಕಲಬುರಗಿಯ ಜಗನ್ನಾಥ ಬೆಲ್ಲದ ಆಯ್ಕೆಯಾಗಿದ್ದಾರೆ.

ಗ್ರಾಫಿಕ್ ಫೆಲೋಶಿಪ್‌ಗಾಗಿ ಬೆಂಗಳೂರಿನ ಅರ್ಪಿತ ಆರ್.ಜಿ., ಹಾಸನದ ಬಸವರಾಜಾಚಾರ್, ಗುಲ್ಬರ್ಗಾದ ಅರವಿಂದ ಕೆ ಕಾಂಬೆ, ಬೆಂಗಳೂರಿನ ಮೈನು ವೈ, ಬೆಂಗಳೂರಿನ ಅನಿಲ್ ಕುಮಾರ್ ಗೋವಿಂದಪ್ಪ ಆಯ್ಕೆಯಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ರಾಜ್ಯದ ಶಬರಿಮಲೆ ಯಾತ್ರಾರ್ಥಿಗಳಿಗಾಗಿ ಸಹಾಯವಾಣಿ

**ಬೆಂಗಳೂರು, ಡಿಸೆಂಬರ್ 01 (ಕರ್ನಾಟಕ ವಾರ್ತೆ):**

ಕೇರಳ ರಾಜ್ಯದ ಶಬರಿಮಲೈನಲ್ಲಿ ಜರುಗುವ 2020-21ನೇ ಸಾಲಿನ ಮಂಡಲ-ಮಕರವಿಳಕ್ಕು ವರ್ಷದ ಕಾರ್ಯಕ್ರಮಕ್ಕೆ ತೆರಳುವ ಕರ್ನಾಟಕ ರಾಜ್ಯದ ಭಕ್ತಾದಿಗಳಿಗೆ/ಯಾತ್ರಾರ್ಥಿಗಳು ಶಬರಿಮಲೆಗೆ ಪ್ರಯಾಣಿಸುವಾಗ ಅಗತ್ಯ ಮಾಹಿತಿ,ಕಷ್ಟ ತೊಂದರೆ, ತುರ್ತು ಸಂದರ್ಭದಲ್ಲಿ ಭಕ್ತರು ಕರ್ನಾಟಕ ರಾಜ್ಯದ ಸಹಾಯವಾಣಿ ಟೋಲ್ ಫ್ರೀ ಸಂಖ್ಯೆ 080 26709689ಗೆ ಕರೆಮಾಡಿ ಸಹಾಯ ಪಡೆಯಬಹುದು ಎಂದು ಪ್ರಕಟಣೆ ತಿಳಿಸಿದೆ.

## ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಬೆಂಗಳೂರು, ಡಿಸೆಂಬರ್ 01 (ಕರ್ನಾಟಕ ವಾರ್ತೆ):

ಕೇಂದ್ರ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ವತಿಯಿಂದ 2020 ದ್ವಿತಿಯ ಪಿಯುಸಿ ಪರೀಕ್ಷೆಯಲ್ಲಿ 80th Percentile ಗಿಂತ ಹೆಚ್ಚು ಅಂಕಗಳಿಸಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ (ಕನಿಷ್ಠ ೦೩ ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ Central Sector Scheme of Scholarship for College and University Studentsಗಳಿಗೆ online ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಕೇಂದ್ರ ಸರ್ಕಾರದ ವತಿಯಿಂದ website:**www.scholarships.gov.inನ National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಈ portalಲ್ಲಿಯೇ **2020ರ Fresh Batchನ ವಿದ್ಯಾರ್ಥಿಗಳು ಮಾತ್ರ ಅರ್ಜಿಗಳನ್ನು "online" ಮೂಲಕ ಸಲ್ಲಿಸುವಂತೆ ಈಗಾಗಲೇ ತಿಳಿಸಲಾಗಿರುತ್ತದೆ.**

ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ಅರ್ಹ **ವಿದ್ಯಾರ್ಥಿಗಳು ಕಾಲೇಜಿನ ಪ್ರಾಂಶುಪಾಲರುಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ದಿನಾಂಕ:31-12-2020ರವರೆಗೆ** ವಿಸ್ತರಿಸಲಾಗಿದೆ.

ಅಂತೆಯೇ, ಪ್ರಾಚಾರ್ಯರುಗಳು, **"online" ಮೂಲಕ** ವಿದ್ಯಾರ್ಥಿಗಳು ಸಲ್ಲಿಸಿರುವ Fresh ಮತ್ತು Renewal ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ** ಇಲಾಖೆಗೆ ದಿನಾಂಕ:**15-01-2021**ರ ಒಳಗೆ ಸಲ್ಲಿಸುವಂತೆ **(Forward ಮಾಡುವಂತೆ)** ಕೋರಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಡಿಸೆಂಬರ್ ೩ ರಂದು ಕನಕದಾಸ ಜಯಂತಿ

ಬೆಂಗಳೂರು, ಡಿಸೆಂಬರ್ 01 (ಕರ್ನಾಟಕ ವಾರ್ತೆ):

ಪ್ರಸಿದ್ಧ ಕೀರ್ತನಕಾರರು, ದಾಸಸಾಹಿತ್ಯದ ಅಗ್ರಗಣ್ಯರಾದ 'ಸಂತ ಶ್ರೇಷ್ಠ ಕನಕದಾಸರ ಜಯಂತಿ' ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಡಿಸೆಂಬರ್ 3 ರಂದು ಬೆಳಿಗ್ಗೆ 10.30 ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದೆ.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಉದಯ್ ಬಿ. ಗರುಡಚಾರ್ ಅವರು ವಹಿಸಲಿದ್ದಾರೆ. ಸಚಿವರುಗಳು, ಶಾಸಕರಗಳು, ಲೋಕಸಭಾ ಸದಸ್ಯರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯವನ್ನು ರಾಯಚೂರು ಜಿಲ್ಲೆಯ ಕನಕ ಗುರು ಪೀಠದ ಕಾಗಿನೆಲೆ ಮಹಾಸಂಸ್ಥಾನ ಜಗದ್ಗುರು ಸಿದ್ದರಾಮಾನಂದ ಸ್ವಾಮೀಜಿಯವರು ವಹಿಸಲಿದ್ದಾರೆ.

ಸದರಿ ದಿನದಂದು ಕಾರ್ಯಕ್ರಮದ ಪ್ರಯುಕ್ತ ಬೆಳಿಗ್ಗೆ 10–30ಕ್ಕೆ ಶಾಸಕರ ಭವನದ ಆವರಣದಲ್ಲಿರುವ ಸಂತ ಕನಕದಾಸರ ಪುತ್ಥಳಿಗೆ ಮುಖ್ಯಮಂತ್ರಿಗಳು ಇತರೆ ಗಣ್ಯರು ಮಾಲಾರ್ಪಣೆ ಮಾಡಲಿದ್ದಾರೆ. ಬೆಳಿಗ್ಗೆ 10–30ಕ್ಕೆ ಶ್ರೀಮತಿ ದೀಪಿಕಾ ಶ್ರೀಕಾಂತ್, ಶಿವಮೊಗ್ಗ ಮತ್ತು ಸಂಗಡಿಗರು ಇವರಿಂದ ಸಂಗೀತ ಕಾರ್ಯಕ್ರಮವನ್ನು ರವೀಂದ್ರ ಕಲಾಕ್ಷೇತ್ರದಲ್ಲಿ ಏರ್ಪಡಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ದತ್ತು ಸ್ವೀಕಾರ

ಬೆಂಗಳೂರು, ಡಿಸೆಂಬರ್ 01 (ಕರ್ನಾಟಕ ವಾರ್ತೆ): ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯದ ಕಾಳಿಂಗ ಸರ್ಪ, ನಾಗರ ಹಾವು, ಇಂಡಿಯನ್ ಸಾಫ್ಟ್‌ಶೆಲ್ ಆಮೆ ಮತ್ತು ಘರಿಯಾಲ್‌ನ್ನು ಮೃಗಾಲಯದ ಪ್ರಾಣಿ ಪಕ್ಷಿಗಳನ್ನು ನಿಗಧಿಪಡಿಸಿರುವ ಶುಲ್ಕವನ್ನು ಪಾವತಿಸಿ ಒಂದು ವರ್ಷಕ್ಕಾಗಿ ಮೈಸೂರಿನ ನಿವಾಸಿಯಾದ ಗೌರಿ ನಾಗರಾಜ್ ಅವರು ದತ್ತು ಸ್ವೀಕರಿಸಿರುತ್ತಾರೆ.

ಬೆಂಗಳೂರಿನ ನಿವಾಸಿಯಾದ ಬಸವರಾಜು ಎನ್.ಎಲ್ ಅವರು ಸಹ ಟಾನಿ ಈಗಲ್ ಪಕ್ಷಿಯನ್ನು ದತ್ತು ಸ್ವೀಕರಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.